Phone: 08282-257424 Fax: 08282-256262
E-Mail: kuhrmsection@gmail.com Website: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ ಶಂಕರಘಟ್ಟ – 577 451
**ಮಾನವ ಸಂಪನ್ಮೂಲ ಮತ್ತು ನಿರ್ವಹಣೆ ವಿಭಾಗ**

ಸಂಖ್ಯೆ:ಕುವಿ:ಮಾಸನಿ–7:420:2021–22 ದಿನಾಂಕ:22–06–2021

## ಸುತ್ತೋಲೆ

ವಿಷಯ: ವಿಶ್ವವಿದ್ಯಾಲಯದ ಎಲ್ಲಾ ಕಛೇರಿಗಳು / ವಿಭಾಗಗಳು / ಘಟಕ ಕಾಲೇಜುಗಳು/ ನೇರ ಆಡಳಿತಕ್ಕೊಳಪಟ್ಟ ಕಾಲೇಜಿನ ಬೋಧಕ / ಬೋಧಕೇತರ / ಏಜೆನ್ಸಿ ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 158 ಟಿಎನ್‌ಆರ್ 2020 ದಿನಾಂಕ:19–06–2021
2. ವಿಶ್ವವಿದ್ಯಾಲಯದ ಸುತ್ತೋಲೆ ಸಂಖ್ಯೆ:ಕುವಿ:ಮಾಸನಿ–7:409:2021–22 ದಿನಾಂಕ:21–06–20212021
3. ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 158 ಟಿಎನ್‌ಆರ್ 2020 ದಿನಾಂಕ:21–06–2021
4. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:22–06–2021

****

ಉಲ್ಲೇಖ (1)ರ ಸರ್ಕಾರದ ಆದೇಶಾನುಸಾರ ಉಲ್ಲೇಖ (2)ರಲ್ಲಿ ದಿನಾಂಕ: 21–06–2021 ರಿಂದ 04–07–2021ರವರೆಗೆ ರಜೆಯನ್ನು ವಿಸ್ತರಿಸಲಾಗಿತ್ತು. ಉಲ್ಲೇಖ (3)ರ ಸರ್ಕಾರದ ಆದೇಶದಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಅನ್‌ಲಾಕ್ ಘೋಷಣೆ ಮಾಡಿರುವುದರಿಂದ ಹಾಗೂ ಮಾನ್ಯ ಕುಲಪತಿಗಳ ಆದೇಶದ ಮೇರೆಗೆ ಉಲ್ಲೇಖ (2)ರ ಸುತ್ತೋಲೆಯನ್ನು ರದ್ದುಗೊಳಿಸಲಾಗಿದೆ (ಚಿಕ್ಕಮಗಳೂರು ಜಿಲ್ಲೆಯನ್ನು ಹೊರತುಪಡಿಸಿ).

ವಿಶ್ವವಿದ್ಯಾಲಯದ ಕಛೇರಿಗಳು / ವಿಶ್ವವಿದ್ಯಾಲಯ ಸ್ನಾತಕೋತ್ತರ ಅಧ್ಯಯನ ವಿಭಾಗಗಳು ಹಾಗೂ ಘಟಕ ಮತ್ತು ನೇರ ಆಡಳಿತಕ್ಕೊಳಪಟ್ಟ ಕಾಲೇಜುಗಳ ಕಛೇರಿಗಳು/ ವಿಭಾಗಗಳು ದಿನಾಂಕ: 22–06–2021 ರಿಂದ ಕಾರ್ಯಾರಂಭಗೊಳ್ಳಲಿವೆ. ಎಲ್ಲಾ ಬೋಧಕ / ಬೋಧಕೇತರ / ಏಜೆನ್ಸಿ ಸಿಬ್ಬಂದಿಗಳು ಈ ಕೆಳಕಂಡ ಮಾರ್ಗಸೂಚಿಗಳನ್ವಯ ದಿನಾಂಕ: 22–06–2021 ರಿಂದ ಕರ್ತವ್ಯಕ್ಕೆ ಹಾಜರಾಗಲು ಸೂಚಿಸಿದೆ.

1. ವಿಶ್ವವಿದ್ಯಾಲಯದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಶೇ. 50ರಂತೆ ರೊಟೇಷನ್ ಆಧಾರದ ಮೇಲೆ ಕರ್ತವ್ಯಕ್ಕೆ ಹಾಜರಾಗತಕ್ಕದ್ದು.
2. ದೃಷ್ಟಿಹೀನ ಹಾಗೂ ಇತರೆ ದೈಹಿಕ ಅಂಗವೈಕಲ್ಯ ಹೊಂದಿರುವ ಅಧಿಕಾರಿ / ಸಿಬ್ಬಂದಿಗಳು ಮತ್ತು ಗರ್ಭಿಣಿ ಸಿಬ್ಬಂದಿಗಳು ಕಛೇರಿಗೆ ಹಾಜರಾಗುವುದರಿಂದ ವಿನಾಯಿತಿ ನೀಡಲಾಗಿದೆ.
3. ವಿಭಾಗದಲ್ಲಿ ಶೇ. 50ರಷ್ಟು ಸಿಬ್ಬಂದಿಗಳನ್ನು ರೊಟೇಷನ್ ಆಧಾರದ ಮೇಲೆ ನಿರ್ಧರಿಸುವ ಅಧಿಕಾರವನ್ನು ಆಯಾ ವಿಭಾಗದ ಮುಖ್ಯಸ್ಥರುಗಳಿಗೆ ನೀಡಲಾಗಿದೆ.
4. ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುವಾಗ ಕೊವೀಡ್–19 ತಡೆಗಟ್ಟುವ ಸಂಬಂಧ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸುವುದು.
5. ವಿಶ್ವವಿದ್ಯಾಲಯದ ಆರೋಗ್ಯ ಕೇಂದ್ರ ಸಿಬ್ಬಂದಿಗಳು, ಭದ್ರತಾ ಸಿಬ್ಬಂದಿಗಳು ಹಾಗೂ ಅಗತ್ಯ ಸೇವಾ ಸಿಬ್ಬಂದಿಗಳು ಎಂದಿನಂತೆ ಪೂರ್ಣಾವಧಿಯಲ್ಲಿ ಕಾರ್ಯ ನಿರ್ವಹಿಸುವುದು,

ಮುಂದುವರೆದು, ವಿಶ್ವವಿದ್ಯಾಲಯವು ಈ ಹಿಂದೆ ಹೊರಡಿಸಲಾದ ಸುತ್ತೋಲೆಗಳ ಪ್ರಕಾರ ಅಧ್ಯಾಪಕರುಗಳು ಸ್ನಾತಕ/ಸ್ನಾತಕೋತ್ತರ ಕೋರ್ಸ್‌ನ ವಿದ್ಯಾರ್ಥಿಗಳಿಗೆ ಆನ್ ಲೈನ್ ತರಗತಿಗಳನ್ನು ಎಂದಿನಂತೆ ತೆಗೆದುಕೊಳ್ಳಲು ಸೂಚಿಸಲಾಗಿದೆ.

**ವಿಶೇಷ ಸೂಚನೆ: ಈ ಆದೇಶವು ದಿನಾಂಕ: 04–07–2021ರವರೆಗೆ ಜಾರಿಯಲ್ಲಿರುತ್ತದೆ.**

ಕುಲಸಚಿವ
ಕುವೆಂಪು ವಿಶ್ವವಿದ್ಯಾನಿಲಯ,
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ–577 451, ಶಿವಮೊಗ್ಗ ಜಿಲ್ಲೆ

ಗೆ:
1. ಕುಲಸಚಿವರು(ಪರೀಕ್ಷಾಂಗ), ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
2. ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
3. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರುಗಳಿಗೆ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ/ ಶಿವಮೊಗ್ಗ/ ಕಡೂರು.

--2

4. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
5. ಕಾರ್ಯಪಾಲಕ ಅಭಿಯಂತರರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
6. ಸಹ್ಯಾದ್ರಿ ವಿಜ್ಞಾನ / ಸಹ್ಯಾದ್ರಿ ಕಲಾ / ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣೆ ಕಾಲೇಜು / ಶ್ರೀಮದ್ ರಂಭಾಪುರಿ ಕಲಾ ಮತ್ತು ವಾಣಿಜ್ಯ ಕಾಲೇಜುಗಳ ಪ್ರಾಚಾರ್ಯರುಗಳಿಗೆ, ಶಿವಮೊಗ್ಗ / ಶಂಕರಘಟ್ಟ.
7. ನಿರ್ದೇಶಕರು: – ಪ್ರಸಾರಾಂಗ / ವಿದ್ಯಾರ್ಥಿ ಕ್ಷೇಮಪಾಲನೆ / ದೂರ ಶಿಕ್ಷಣ ನಿರ್ದೇಶನಾಲಯ/ ಕಾಲೇಜು ಅಭಿವೃದ್ಧಿ ಪರಿಷತ್ತು/ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿ / ಅಂಬೇಡ್ಕರ್ ಅಧ್ಯಯನ ಕೇಂದ್ರ, / ಅಭಿವೃದ್ಧಿ ವಿಭಾಗ/ ದೈಹಿಕ ಶಿಕ್ಷಣ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
8. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ ಬಿ.ಹೆಚ್.ರಸ್ತೆ, ಕಡೂರು
9. ಸಂಯೋಜನಾಧಿಕಾರಿಗಳು, ಸ್ನಾತಕೋತ್ತರ ಕೇಂದ್ರ, ಐಡಿಎಸ್‌ಜಿ ಕಾಲೇಜು ಆವರಣ, ಜ್ಯೋತಿನಗರ, ಚಿಕ್ಕಮಗಳೂರು.
10. ವೈದ್ಯಾಧಿಕಾರಿಗಳು, ವಿಶ್ವವಿದ್ಯಾಲಯ ಆರೋಗ್ಯ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
11. ಸಂಯೋಜನಾಧಿಕಾರಿಗಳು, ಐ.ಕ್ಯೂ.ಎ.ಸಿ. / ಮಹಿಳೆಯರ ಮೂಲ ಸೌಕರ್ಯಗಳ ಅಭಿವೃದ್ಧಿ ಘಟಕ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
12. ಶಿಕ್ಷಕ ಸಲಹೆಗಾರರು, ಸ್ನಾತಕೋತ್ತರ ಪುರುಷರ:ಮಹಿಳಾ ವಿದ್ಯಾರ್ಥಿಗಳ ನಿಲಯ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
13. ಕಾರ್ಯಕ್ರಮ ಸಂಯೋಜನಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನಾ ವಿಭಾಗ, ನಗರ ಕಛೇರಿ ಬೈಪಾಸ್ ರಸ್ತೆ, ಶಿವಮೊಗ್ಗ.
14. ಸಂಚಾಲಕರು, ಪಠ್ಯೇತರ ಚಟುವಟಿಕೆ ವಿಭಾಗ, ಎಸ್.ಸಿ/ಎಸ್.ಟಿ. ಸೆಲ್/ ಓ.ಬಿ.ಸಿ. ಅಂಬೇಡ್ಕರ್ ಅಧ್ಯಯನ ಪೀಠ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
15. ಸಾರ್ವಜನಿಕ ಸಂಪರ್ಕ ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
16. ನಿರ್ದೇಶಕರು, ಯು.ಸಿ.ಸಿ.ಎಫ್., ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
17. ಎಲ್ಲಾ ಉಪಕುಲಸಚಿವರಿಗೆ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
18. ಎಲ್ಲಾ ಸಹಾಯಕ ಕುಲಸಚಿವರು/ ಶಾಖಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
19. ಆಪ್ತ ಕಾರ್ಯಾಲಯ: ಕುಲಪತಿಗಳು: ಕುಲಸಚಿವರು: ಕುಲಸಚಿವರು(ಪರೀಕ್ಷಾಂಗ):ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
20. ವ್ಯವಸ್ಥಾಪಕರು, ವಿಶ್ವವಿದ್ಯಾಲಯದ ಅತಿಥಿ ಗೃಹ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
21. ಕಛೇರಿ ಪ್ರತಿ.